ಶಿವಾಜಿನಗರ ಕ್ಷೇತ್ರದಲ್ಲಿ ಹೊಸ ಶಾಲೆಗಳ ಮಂಜೂರಾತಿ

3551 (4057) ಶ್ರೀ ಕಟ್ಟಾ ಸುಬ್ರಮಣ್ಯ ನಾಯ್ಡು (ಶಿವಾಜಿನಗರ) : ಮಾನ್ಯ ಪ್ರಾಥಮಿಕ ಮತ್ತು ಪ್ರೌಢಶಿಕ್ಷಣ ರಾಜ್ಯ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ಉತ್ತರಿಸುವರೆ?

ಅ) ಶಿವಾಜಿನಗರ ವಿಧಾನ ಸಭಾ ಕ್ಷೇತ್ರದಲ್ಲಿರುವ ಸರ್ಕಾರಿ, ಖಾಸಗಿ ಪ್ರಾಥಮಿಕ ಮತ್ತು ಪ್ರೌಢಶಾಲೆಗಳ ಸಂಖ್ಯೆ ಎಷ್ಟು;

ಆ) 2002–03ನೇ ಸಾಲಿನಲ್ಲಿ ಹೊಸದಾಗಿ ಪ್ರಾರಂಭಿಸಿದ ಸರ್ಕಾರಿ ಹಾಗೂ ಖಾಸಗಿ ಪ್ರಾಥಮಿಕ ಹಾಗೂ ಪ್ರೌಢ ಶಾಲೆಗಳ ಸಂಖ್ಯೆ ಎಷ್ಟು;

ಇ) ಈ ಕ್ಷೇತ್ರದಲ್ಲಿ 2003–04ನೇ ಸಾಲಿನಲ್ಲಿ ಹೊಸದಾಗಿ ಕನ್ನಡ ಮತ್ತು ಆಂಗ್ಲ ಮಾಧ್ಯಮ ಪ್ರಾಥಮಿಕ ಹಾಗೂ ಪ್ರೌಢಶಾಲೆಗಳನ್ನು ತೆರೆಯಲಾಗಿದೆಯೇ;

ಈ) ಹಾಗಿದ್ದಲ್ಲಿ ಎಷ್ಟು ಶಾಲೆಗಳನ್ನು ತೆರೆಯಲಾಗಿದೆ?

ಪ್ರೊ: ಬಿ.ಕೆ. ಚಂದ್ರಶೇಖರ್ (ಪ್ರಾಥಮಿಕ ಮತ್ತು ಪ್ರೌಢಶಿಕ್ಷಣ ರಾಜ್ಯ ಸಚಿವರು):

ಅ)

ಸರ್ಕಾರಿ		ಅನುದಾನಿತ		ಅನುದಾನ ರಹಿತ	
ಪ್ರಾಥಮಿಕ	ಪ್ರೌಢ	ಪ್ರಾಥಮಿಕ	ಪ್ರೌಢ	ಪ್ರಾಥಮಿಕ	ಪ್ರೌಢ
19	03	18	13	29	09

ಆ) ಇಲ್ಲ

ಇ) ಮತ್ತು ಈ) ಸರ್ಕಾರಿ ಪ್ರಾಥಮಿಕ ಶಾಲೆ 01ನ್ನು ಮಾತ್ರ ತೆರೆಯಲಾಗಿದೆ.

ಬೆಳಗಾವಿ ಜಿಲ್ಲೆಯಲ್ಲಿ ಖಾಲಿ ಇರುವ ಪ್ರಾಥಮಿಕ ಶಿಕ್ಷಕರ ಹುದ್ದೆಗಳನ್ನು ತುಂಬುವುದು

3552 (3489) ಶ್ರೀ ಕೌಜಲಗಿ ಮಹಾಂತೇಶ್ ಶಿವಾನಂದ (ಬೈಲಹೊಂಗಲ) : ಮಾನ್ಯ ಪ್ರಾಥಮಿಕ ಮತ್ತು ಪ್ರೌಢಶಿಕ್ಷಣ ರಾಜ್ಯ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ಉತ್ತರಿಸುವರೆ?

ಅ) ರಾಜ್ಯದಲ್ಲಿ ಎಷ್ಟು ಪ್ರಾಥಮಿಕ ಶಿಕ್ಷಕರ ಹುದ್ದೆಗಳು ಖಾಲಿ ಇರುತ್ತವೆ; (ಜಿಲ್ಲಾವಾರು ಮಾಹಿತಿ ನೀಡುವುದು)

ಆ) ಬೆಳಗಾವಿ ಜಿಲ್ಲೆಯಲ್ಲಿ ಎಷ್ಟು ಪ್ರಾಥಮಿಕ ಶಿಕ್ಷಕರ ಹುದ್ದೆಗಳು ಖಾಲಿ ಇರುತ್ತವೆ; (ತಾಲ್ಲೂಕುವಾರು ಮಾಹಿತಿ ನೀಡುವುದು);

ಇ) ಬೈಲಹೊಂಗಲ ಹಾಗೂ ಸವದತ್ತಿ ತಾಲ್ಲೂಕುಗಳಲ್ಲಿ ಖಾಲಿ ಇರುವ ಶಿಕ್ಷಕರ ಹುದ್ದೆಗಳನ್ನು ತುಂಬಲು ಯಾವ ಕ್ರಮ ಕೈಗೊಳ್ಳಲಾಗಿದೆ;

ಈ) ಇನ್ನೂ ಎಷ್ಟು ದಿನಗಳೊಳಗಾಗಿ ಈ ಹುದ್ದೆಗಳನ್ನು ತುಂಬಲಾಗುವುದು?

ಪ್ರೊ: ಬಿ.ಕೆ. ಚಂದ್ರಶೇಖರ್ (ಪ್ರಾಥಮಿಕ ಮತ್ತು ಪ್ರೌಢಶಿಕ್ಷಣ ರಾಜ್ಯ ಸಚಿವರು):

ಅ) ರಾಜ್ಯದಲ್ಲಿ ಒಟ್ಟು 7800 ಪ್ರಾಥಮಿಕ ಶಿಕ್ಷಕರ ಹುದ್ದೆಗಳು ಖಾಲಿ ಇರುತ್ತದೆ. (ಜಿಲ್ಲಾವಾರು ಪಟ್ಟಿ ಲಗತ್ತಿಸಿದೆ)

ಆ) ಬೆಳಗಾವಿ ಜಿಲ್ಲೆಯಲ್ಲಿ ಒಟ್ಟು 91 ಪ್ರಾಥಮಿಕ ಶಾಲಾ ಶಿಕ್ಷಕರ ಹುದ್ದೆಗಳು ಖಾಲಿ ಇವೆ

ತಾಲ್ಲೂಕುವಾರು ಮಾಹಿತಿ

ಬೈಲಹೊಂಗಲ	06	ಖಾನಾಪುರ	77
ಬೆಳಗಾಂ ತಾ॥	ಇಲ್ಲ	ರಾಮದುರ್ಗ	05
ಬೆಳಗಾಂ ನಗರ	ಇಲ್ಲ	ಸವದತ್ತಿ	03

ಇ) 2003–04ನೇ ಸಾಲಿನಲ್ಲಿ 5000 ಪ್ರಾಥಮಿಕ ಶಾಲಾ ಶಿಕ್ಷಕರ ಹುದ್ದೆಗಳನ್ನು ಭರ್ತಿ ಮಾಡಲು ನೇಮಕಾತಿ ಪ್ರಕ್ರಿಯೆ ಪ್ರಗತಿಯಲ್ಲಿದೆ. ಸದರಿ ನೇಮಕಾತಿಯಲ್ಲಿ ಖಾಲಿ ಇರುವ ಶಿಕ್ಷಕರ ಹುದ್ದೆಗಳನ್ನು ಭರ್ತಿ ಮಾಡುವ ಕ್ರಮ ಕೈಗೊಳ್ಳಲಾಗುವುದು.

ಈ) ಶೀಘ್ರದಲ್ಲಿಯೇ ಈ ಹುದ್ದೆಗಳನ್ನು ಭರ್ತಿ ಮಾಡಲಾಗುವುದು.

ರಾಜ್ಯದಲ್ಲಿ ಹೊಸದಾಗಿ ಬಿ.ಎಡ್. ಕಾಲೇಜುಗಳನ್ನು ಪ್ರಾರಂಭಿಸುವುದು

3553 (3490) ಶ್ರೀ ಕೌಜಲಗಿ ಮಹಾಂತೇಶ್ ಶಿವಾನಂದ (ಬೈಲಹೊಂಗಲ) : ಮಾನ್ಯ ಉನ್ನತ ಶಿಕ್ಷಣ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ಉತ್ತರಿಸುವರೆ?

ಅ) ರಾಜ್ಯದಲ್ಲಿ ಎಷ್ಟು ಹೊಸ ಬಿ.ಎಡ್. ಕಾಲೇಜುಗಳನ್ನು ಪ್ರಾರಂಭಿಸಬೇಕೆಂದು ಉದ್ದೇಶಿಸಲಾಗಿದೆ;

ಆ) ಯಾವ ಯಾವ ಷರತ್ತಿನ ಮೇಲೆ ಈ ಕಾಲೇಜುಗಳಿಗೆ ಅನುಮತಿ ನೀಡಲಾಗುವುದು;

ಇ) ಈ ಕಾಲೇಜುಗಳ ಪ್ರಾರಂಭಕ್ಕಾಗಿ ಎಷ್ಟು ಅರ್ಜಿಗಳು ಬಂದಿರುತ್ತವೆ; (ಜಿಲ್ಲಾವಾರು ಮಾಹಿತಿ ನೀಡುವುದು);

ಈ) ಬೆಳಗಾವಿ ಜಿಲ್ಲೆಯಲ್ಲಿ ಎಷ್ಟು ಅರ್ಜಿಗಳು ಬಂದಿರುತ್ತವೆ ಹಾಗೂ ಯಾವ ಯಾವ ಶಿಕ್ಷಣ ಸಂಸ್ಥೆಯವರು ಯಾವ ಯಾವ ಸ್ಥಳಗಳಲ್ಲಿ ಕಾಲೇಜುಗಳನ್ನು ತೆರೆಯಬೇಕೆಂದು ಉದ್ದೇಶಿಸಿರುವರು?

ಡಾ॥ ಜಿ. ಪರಮೇಶ್ವರ್ (ಉನ್ನತ ಶಿಕ್ಷಣ ಸಚಿವರು):

ಅ) 2003–04ನೇ ಸಾಲಿನಿಂದ ಬಿ.ಎಡ್/ಬಿ.ಪಿ.ಎಡ್ ಕಾಲೇಜುಗಳ ಸ್ಥಾಪನೆ ಮೇಲಿನ ನಿರ್ಬಂಧವನ್ನು ತೆರವು ಗೊಳಿಸಲಾಗಿದೆ. ಆದರೆ ಮಂಜೂರು ಮಾಡಬಹುದಾದ ಕಾಲೇಜುಗಳ ಸಂಖ್ಯೆಯ ಬಗ್ಗೆ ಯಾವುದೇ ನಿರ್ಣಯ ತೆಗೆದುಕೊಂಡಿಲ್ಲ.

ಆ) ಇತರ ಸಾಮಾನ್ಯ ಷರತ್ತುಗಳ ಜೊತೆಗೆ ಸರ್ಕಾರದ ನೀತಿಯನ್ವಯ ಕೇಂದ್ರೀಕೃತ ದಾಖಲಾತಿ ಘಟಕದ ಮೂಲಕ ನಿರ್ಧರಿತ ಪ್ರಮಾಣದಲ್ಲಿ ವಿತರಿಸಲಾಗುವ ಸರ್ಕಾರಿ ಪ್ರವರ್ಗದ ಸೀಟುಗಳನ್ನು ದಾಖಲಾತಿ ಮಾಡಿಕೊಳ್ಳಬೇಕೆಂಬ ಷರತ್ತನ್ನು ವಿಧಿಸಲಾಗುತ್ತದೆ.

ಇ) ದಿನಾಂಕ: 2.6.2003 ಸಂಖ್ಯೆ : ಇಡಿ 20 ಯುಆರ್‌ಸಿ 2003ರ ಸರ್ಕಾರಿ ಆದೇಶದಲ್ಲಿ ವಿಶ್ವವಿದ್ಯಾಲಯಗಳಿಗೆ ಸಂಯೋಜನಾ ಅರ್ಜಿಗಳನ್ನು ಆಹ್ವಾನಿಸಲು ಜಾಹಿರಾತುಗಳನ್ನು ನೀಡಲು ಸೂಚಿಸಿದೆ. ಈ ಮೇರೆಗೆ ಸಂಬಂಧಪಟ್ಟ ವಿಶ್ವವಿದ್ಯಾಲಯಗಳು ಅರ್ಜಿಗಳನ್ನು ಆಹ್ವಾನಿಸಿದ್ದು, ವಿವಿಧ ಹಂತದಲ್ಲಿ ಪ್ರಕ್ರಿಯೆಗಳು ನಡೆದಿರುತ್ತವೆ. ವಿಶ್ವವಿದ್ಯಾಲಯಗಳಿಂದ ಪ್ರಸ್ತಾವನೆಗಳನ್ನು ನಿರೀಕ್ಷಿಸಲಾಗಿದೆ.

ಈ) (ಇ) ಗೆ ಉತ್ತರಿಸಿರುವ ಹಿನ್ನೆಲೆಯಲ್ಲಿ ಇದು ಉದ್ಭವಿಸುವುದಿಲ್ಲ.